## ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 19-05-2015ರ ನಡವಳಿಗಳು

**ವಿಷಯದ ಸಂಖ್ಯೆ : 63 / 2015-16**

ವಿಷಯ: ತುಟ್ಟಿಭತ್ಯೆಯ ದರಗಳ ಪರಿಷ್ಕರಣೆ ಮಾಡುವ ಬಗ್ಗೆ

**ಪ್ರಸ್ತಾವನೆ:**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಸರ್ಕಾರದ ಆರ್ಥಿಕ ಇಲಾಖೆಯ ಸಂಖ್ಯೆ:ಎಫ್‌ಡಿ 11 ಎಸ್‌ಆರ್‌ಪಿ 2015, ದಿನಾಂಕ:24-04-2015ರ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರುಗಳಿಗೆ 2012ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ 1ನೇ ಜನವರಿ 2015 ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ ಶೇಕಡ 25.25 ರಿಂದ ಶೇ.28.75ಗೆ ಹೆಚ್ಚಿಸಿ ಮಂಜೂರು ಮಾಡಿರುತ್ತದೆ.

ಸದರಿ ಆದೇಶವನ್ನು ಪಾಲಿಕೆಯಲ್ಲಿ ಅಳವಡಿಸಿಕೊಳ್ಳಲು ಮುಖ್ಯ ಲೆಕ್ಕಾಧಿಕಾರಿಗಳು ದಿನಾಂಕ: 06-05-2015 ರಲ್ಲಿ ವರದಿ ಮಂಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ:9154 ಖಾಯಂ ಅಧಿಕಾರಿ / ನೌಕರರುಗಳಿಗೆ 2015-16ನೇ ಸಾಲಿನ ಆಯವ್ಯಯದಲ್ಲಿ ಸಾಮಾನ್ಯ ಆಡಳಿತ, ವೇತನ ಮತ್ತು ಇತರೇ ವೆಚ್ಚಗಳು ಲೆಕ್ಕ ಶೀರ್ಷಿಕೆಯಡಿಯಲ್ಲಿ ಶೇ.3.50% ಹೆಚ್ಚುವರಿ ತುಟ್ಟಿಭತ್ಯೆಯನ್ನು ಅವಕಾಶ ಮಾಡಿಕೊಳ್ಳುವ ಸಲುವಾಗಿ ಸರ್ಕಾರದ ಆದೇಶದನ್ವಯ ದಿನಾಂಕ: 01-01-2015 ರಿಂದ ಜಾರಿಗೆ ಬರುವಂತೆ ಮೂಲ ವೇತನದ ಶೇ.3.50% ತುಟ್ಟಿಭತ್ಯೆಯನ್ನು ಪಾಲಿಕೆಯ ಅಧಿಕಾರಿ / ನೌಕರರುಗಳಿಗೆ ನೀಡುವುದರಿಂದ ಮಾಹೆಯಾನ ರೂ.54,80,221-00 ಗಳು ಅಧಿಕವಾಗಿ ಹೆಚ್ಚಿನ ವೆಚ್ಚವಾಗಲಿದೆಯೆಂದು ತಿಳಿಸಿರುತ್ತಾರೆ.

ಆದುದರಿಂದ ಸರ್ಕಾರದ ಆರ್ಥಿಕ ಇಲಾಖೆಯ ಆದೇಶವನ್ನು ನಗರ ಪಾಲಿಕೆಯಲ್ಲಿ ಅಳವಡಿಸಿಕೊಳ್ಳುವ ಬಗ್ಗೆ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ: 18-05-2015ರ ಟಿಪ್ಪಣಿ.

ತೀರ್ಮಾನ: **"ಅನುಮೋದಿಸಿದೆ. ಜೊತೆಗೆ ದಿನಾಂಕ:24-04-2015ರ ಸರ್ಕಾರಿ ಆದೇಶದ ಕಂಡಿಕೆ:5 ರಂತೆ ಕ್ರಮ ಜರುಗಿಸಲು ಅನುಮೋದಿಸಿದೆ".**

(ಟಿ.ಎಂ.ವಿಜಯಭಾಸ್ಕರ್)
ಆಡಳಿತಗಾರರು